No.PCCF/C/GL-108/2017-18

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು) ರವರ ಕಛೇರಿ,
ಅರಣ್ಯ ಭವನ, ಮಲ್ಲೇಶ್ವರಂ,
ಬೆಂಗಳೂರು, ದಿನಾಂಕ: 31-05-2019.
04/06/2019

**ಅಧಿಕೃತ ಜ್ಞಾಪನಾ ಪತ್ರ**

ವಿಷಯ:- "Forest Martyrs Day" Observation, Constitution of Committee - reg.

ಉಲ್ಲೇಖ:- 1. ಈ ಕಛೇರಿ ಅಧಿಕೃತ ಜ್ಞಾಪನಾ ಪತ್ರದ ದಿನಾಂಕ: 29.12.2011.

2. ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣಾ ಸಮಿತಿಯ ಸಭಾ ನಡವಳಿ ದಿನಾಂಕ: 23.04.2019.

***

**ಪ್ರಸ್ತಾವನೆ:**

ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನು ವ್ಯವಸ್ಥಿತವಾಗಿ ಸಂಘಟಿಸಲು ಮತ್ತು ಈ ವಿಷಯದಲ್ಲಿ ಎಲ್ಲಾ ವೃತ್ತಗಳೊಂದಿಗೆ ಸಹಕರಿಸಲು ಉಲ್ಲೇಖ (1) ರಲ್ಲಿ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯಲ್ಲಿ (1) ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಕೇಂದ್ರಸ್ಥಾನ & ಸಮನ್ವಯ) ಬೆಂಗಳೂರು-ಅಧ್ಯಕ್ಷರು (2) ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ವೃತ್ತ, ಬೆಂಗಳೂರು-ಸದಸ್ಯರು (3) ಉಪ ಅರಣ್ಯ ಸಂರಕ್ಷಣಾಧಿಕಾರಿ (ಕೇಂದ್ರಸ್ಥಾನ), ಬೆಂಗಳೂರು-ಸದಸ್ಯ ಆಯೋಜಕರು (4) ಉಪ ಅರಣ್ಯ ಸಂರಕ್ಷಣಾಧಿಕಾರಿ, ನಗರ ವಿಭಾಗ, ಬೆಂಗಳೂರು-ಸದಸ್ಯರು (5) ಉಪ ಅರಣ್ಯ ಸಂರಕ್ಷಣಾಧಿಕಾರಿ, ಗ್ರಾಮಾಂತರ ವಿಭಾಗ, ಬೆಂಗಳೂರು-ಸದಸ್ಯರು ಇರುತ್ತಾರೆ. ಪ್ರಸ್ತುತ ಬೆಂಗಳೂರು ಗ್ರಾಮಾಂತರ ವಿಭಾಗ ಕಛೇರಿಯನ್ನು ಬೆಂಗಳೂರು ನಗರದಿಂದ ಸಾವಕನಹಳ್ಳಿ ಗೇಟ್, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿಗೆ ಸ್ಥಳಾಂತರಿಸಿರುವುದರಿಂದ ಉಲ್ಲೇಖ (2)ರಲ್ಲಿ ಬೆಂಗಳೂರು ಗ್ರಾಮಾಂತರ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಇವರ ಬದಲಿಗೆ ಬೆಂಗಳೂರು ಅರಣ್ಯ ಸಂಚಾರಿ ದಳದ ಉಪ ಅರಣ್ಯ ಸಂರಕ್ಷಣಾಧಿಕಾರಿಯವರನ್ನು ಸದರಿ ಸಮಿತಿಯ ಸದಸ್ಯರನ್ನಾಗಿ ನೇಮಿಸಿಕೊಳ್ಳಲು ತೀರ್ಮಾನಿಸಲಾಗಿರುತ್ತದೆ. ಅಲ್ಲದೆ ಉಲ್ಲೇಖ (1) ರಲ್ಲಿ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ವೃತ್ತ ಇವರನ್ನು ಸಮಿತಿಯ ಸದಸ್ಯರನ್ನಾಗಿ ನೇಮಿಸಿದ್ದು, ಸದರಿ ಹುದ್ದೆಯನ್ನು ಉನ್ನತೀಕರಿಸಿದ ಹಿನ್ನೆಲೆಯಲ್ಲಿ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ವೃತ್ತ ಇವರ ಬದಲಿಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ವೃತ್ತ ಎಂದು ಬದಲಾಯಿಸುವ ಬಗ್ಗೆ ತೀರ್ಮಾನಿಸಲಾಗಿರುತ್ತದೆ. ಆದುದರಿಂದ ಈ ಕೆಳಕಂಡ ಆದೇಶ.

**ಆದೇಶ**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ಗ್ರಾಮಾಂತರ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಇವರ ಬದಲಿಗೆ ಬೆಂಗಳೂರು ಅರಣ್ಯ ಸಂಚಾರಿ ದಳದ ಉಪ ಅರಣ್ಯ ಸಂರಕ್ಷಣಾಧಿಕಾರಿಯವರನ್ನು ಸದಸ್ಯರನ್ನಾಗಿ ಮತ್ತು ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ವೃತ್ತ ಇವರ ಹುದ್ದೆಯನ್ನು ಉನ್ನತೀಕರಿಸಿದ ಹಿನ್ನೆಲೆಯಲ್ಲಿ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ವೃತ್ತ ರವರ ಬದಲಿಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ವೃತ್ತ ಎಂದು ಬದಲಾಯಿಸುವ ಮೂಲಕ

ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಸಮಿತಿಯು ಈ ಕೆಳಕಂಡ ಅಧಿಕಾರಿಗಳನ್ನು ಒಳಗೊಂಡಿರುತ್ತದೆ.

1. ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಕೇಂದ್ರಸ್ಥಾನ & ಸಮನ್ವಯ) ಬೆಂಗಳೂರು – ಅಧ್ಯಕ್ಷರು
2. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ವೃತ್ತ, ಬೆಂಗಳೂರು – ಸದಸ್ಯರು
3. ಉಪ ಅರಣ್ಯ ಸಂರಕ್ಷಣಾಧಿಕಾರಿ (ಕೇಂದ್ರಸ್ಥಾನ), ಬೆಂಗಳೂರು – ಸದಸ್ಯ ಆಯೋಜಕರು
4. ಉಪ ಅರಣ್ಯ ಸಂರಕ್ಷಣಾಧಿಕಾರಿ, ನಗರ ವಿಭಾಗ, ಬೆಂಗಳೂರು – ಸದಸ್ಯರು
5. ಉಪ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಸಂಚಾರಿ ದಳ, ಬೆಂಗಳೂರು – ಸದಸ್ಯರು

ಮೇಲ್ಕಂಡ ಸಮಿತಿಯು ಪ್ರತಿ ವರ್ಷ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನು ವ್ಯವಸ್ಥಿತವಾಗಿ ಸಂಘಟಿಸಲು ಮತ್ತು ಈ ವಿಷಯದಲ್ಲಿ ಎಲ್ಲಾ ವೃತ್ತಗಳೊಂದಿಗೆ ಸಹಕರಿಸುವಂತೆ ಆದೇಶಿಸಿದೆ.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು)

**ಪ್ರತಿಯನ್ನು:**

1) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಬೆಂಗಳೂರು.
2) ಎಲ್ಲಾ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು.
3) ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಕೇಂದ್ರಸ್ಥಾನ & ಸಮನ್ವಯ), ಅರಣ್ಯ ಭವನ, ಬೆಂಗಳೂರು.
4) ಎಲ್ಲಾ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು.
5) ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ವೃತ್ತ, ಬೆಂಗಳೂರು.
6) ಉಪ ಅರಣ್ಯ ಸಂರಕ್ಷಣಾಧಿಕಾರಿಗಳು (ಕೇಂದ್ರಸ್ಥಾನ) ಬೆಂಗಳೂರು/ಬೆಂಗಳೂರು ಗ್ರಾಮಾಂತರ ವಿಭಾಗ, ಸಾವಕನಹಳ್ಳಿ ಗೇಟ್, ದೇವನಹಳ್ಳಿ ತಾಲ್ಲೂಕು/ಬೆಂಗಳೂರು ನಗರ ವಿಭಾಗ/ಬೆಂಗಳೂರು ಅರಣ್ಯ ಸಂಚಾರಿ ದಳ, ಬೆಂಗಳೂರು.

CCF
ICT